# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 220
2. ಸದಸ್ಯರ ಹೆಸರು : ಡಾ|| ವೈ.ಎ ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 06.07.2023
4. ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಜಲ ಸಂಪನ್ಮೂಲ ಇಲಾಖೆಯಲ್ಲಿ ಎತ್ತಿನಹೊಳೆ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದ್ದು, ಯಾವಾಗ; ಯೋಜನೆಯ ಉದ್ದೇಶಗಳೇನು: | ಕುಡಿಯುವ ನೀರಿನ ತೀವ್ರ ಅಭಾವ ಎದುರಿಸುತ್ತಿರುವ ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ, ಬೆಂಗಳೂರು ಗ್ರಾಮಾಂತರ, ತುಮಕೂರು, ಚಿಕ್ಕಮಗಳೂರು ಮತ್ತು ಹಾಸನ ಜಿಲ್ಲೆಗಳಿಗೆ ಕುಡಿಯುವ ನೀರು ಒದಗಿಸಲು ಮತ್ತು ಪಾಲರ್ ಹಾಗೂ ಪೆನ್ನಾರ್ ಕೊಳ್ಳಗಳಲ್ಲಿ ಬರುವ ಒಟ್ಟು 527 ಸಣ್ಣ ನೀರಾವರಿ ಕೆರೆಗಳನ್ನು ಅವುಗಳ ಸಾಮರ್ಥ್ಯದ ಶೇ.50 ರಷ್ಟು ತುಂಬಿಸಿ ಅಂತರ್ಜಲ ಅಭಿವೃದ್ಧಿಗೊಳಿಸಲು ಯೋಜಿಸಲಾಗಿರುವ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಅನುಷ್ಠಾನ ಪ್ರಕ್ರಿಯೆಯನ್ನು 2012 ರಲ್ಲಿ ಪ್ರಾರಂಭಿಸಲಾಗಿದೆ. |
| ಆ) | ಇದೂವರೆವಿಗೂ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ; ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ; (ವಿವರಗಳನ್ನು ನೀಡುವುದು) | • ಸದರಿ ಯೋಜನೆಯ ಹಂತ-1ರಡಿ ಕೈಗೊಂಡಿರುವ ಲಿಫ್ಟ್ ಮತ್ತು ವಿದ್ಯುತ್ ಕಾಮಗಾರಿಗಳು ಬಹುತೇಕ ಪೂರ್ಣಗೊಳ್ಳುವ ಹಂತದಲ್ಲಿದೆ.<br>• ಎರಡನೇ ಹಂತದ Conveyance ಭಾಗದ ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿದೆ.<br>• ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಗೆ ಮೇ 2023 ರ ಅಂತ್ಯದವರೆಗೆ ಒಟ್ಟಾರೆಯಾಗಿ ಸಂಚಿತ ರೂ.14,068.12 ಕೋಟಿ ವೆಚ್ಚ ಮಾಡಲಾಗಿರುತ್ತದೆ. |
| ಇ) | ಭೈರಗೊಂಡ್ಲು ಜಲಾಶಯದ ಕಾಮಗಾರಿಯು ಇನ್ನೂ ಪ್ರಾರಂಭವಾಗದಿರಲು ಕಾರಣಗಳೇನು; | ಭೈರಗೊಂಡ್ಲು ಜಲಾಶಯಕ್ಕೆ ಅಗತ್ಯವಿರುವ ಭೂಸ್ವಾಧೀನ ಪ್ರಕ್ರಿಯೆ ಸಂದರ್ಭದಲ್ಲಿ ಕೊರಟಗೆರೆ ತಾಲ್ಲೂಕಿನ ರೈತರು ದೊಡ್ಡಬಳ್ಳಾಪುರ ತಾಲ್ಲೂಕಿನ ರೈತರಿಗೆ ನೀಡುವ ಪರಿಹಾರ ದರದಂತೆ ಅವರಿಗೂ ಸಹಾ ಏಕರೂಪ ದರ ನೀಡಲು ಒತ್ತಾಯಿಸಿದ್ದರಿಂದ ಕಾಮಗಾರಿಗಳಿಗೆ ಅಡೆತಡೆ ಉಂಟಾಗಿರುತ್ತದೆ. |
| ಈ) | ಯಾವ ಕಾಲಮಿತಿಯೊಳಗೆ ಕಾಮಗಾರಿಯನ್ನು ಮಾಡಲು ಉದ್ದೇಶಿಸಲಾಗಿದೆ; ಹಾಗೂ ಎಷ್ಟು ಅವಧಿಯೊಳಗೆ ಪೂರ್ಣಗೊಳಿಸಲಾಗುವುದು; | ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನಾ ಕಾಮಗಾರಿಗಳನ್ನು ಅನುದಾನದ ಲಭ್ಯತೆ ಮೇರೆಗೆ 2024-25 ನೇ ಸಾಲಿನ ಅಂತ್ಯಕ್ಕೆ ಪೂರ್ಣಗೊಳಿಸಲು ಯೋಜಿಸಲಾಗಿದೆ. |
| ಉ) | ಎತ್ತಿನಹೊಳೆ ಯೋಜನೆಯನ್ನು ನಿಗಧಿತ ಕಾಲಮಿತಿಯೊಳಗೆ ಸಂಪೂರ್ಣಗೊಳಿಸಲಾಗುವುದೆ? | |

**ಸಂಖ್ಯೆ: ಜಸಂಇ 27 ಡಬ್ಲ್ಯೂಎಲ್ಎ 2023**

**(ಡಿ.ಕೆ ಶಿವಕುಮಾರ್)**
**ಉಪ ಮುಖ್ಯಮಂತ್ರಿಗಳು**